ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ಸಿ. ಆ. ಸು. ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 5/11/20

# ನೌಕರರು ಐಡಿ ಕಾರ್ಡ್ ಧರಿಸುವುದು ಕಡ್ಡಾಯ

5-11-20

**ಬೆಂಗಳೂರು:** ಸರಕಾರಿ ಕಚೇರಿಗಳಲ್ಲಿ ಕಾರ್ಯ ನಿರ್ವಹಿಸುವ ಎಲ್ಲ ಅಧಿಕಾರಿ, ನೌಕರರು ಕಡ್ಡಾಯವಾಗಿ ಗುರುತಿನ ಪತ್ರ(ಐಡಿ ಕಾರ್ಡ್) ಧರಿಸಿರಬೇಕು ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ(ಡಿಪಿಎಆರ್) ಸೂಚನೆ ನೀಡಿದೆ. ಬ್ಯಾಂಕ್, ಅಂಚೆ ಕಚೇರಿಗಳಲ್ಲಿ ವ್ಯವಸ್ಥೆ ಇರುವಂತೆ ಸರಕಾರಿ ಕಚೇರಿಗಳಲ್ಲೂ ಸಂಬಂಧಿಸಿದ ಅಧಿಕಾರಿ, ಸಿಬ್ಬಂದಿಯ ಹುದ್ದೆ ಸಹಿತ ಫಲಕ ಅಳವಡಿಸಬೇಕು. ಈ ಅಧಿಕಾರಿ, ನೌಕರರು ಕರ್ತವ್ಯ ನಿರ್ವಹಿಸುವ ಕಚೇರಿಯ ಮೇಜಿನ ಮೇಲೂ ಹುದ್ದೆ ತಿಳಿಸುವ ಫಲಕವಿರಬೇಕು. ಜತೆಗೆ ಗುರುತಿನ ಚೀಟಿಯನ್ನು ಕೊರಳಿಗೆ ಹಾಕಿಕೊಂಡಿರಬೇಕು ಎಂದು ಸೂಚಿಸಲಾಗಿದೆ.

**ಅನುದಾನ ಬಿಡುಗಡೆಗೆ ಒಪ್ಪಿಗೆ:** ಪ್ರಸಕ್ತ ಆರ್ಥಿಕ ವರ್ಷದಲ್ಲಿ ಎರಡನೇ ಕಂತಿನಡಿ ಶಾಸಕರ ಪ್ರದೇಶಾಭಿವೃದ್ಧಿ ನಿಧಿಗೆ 150 ಕೋಟಿ ರೂ. ಬಿಡುಗಡೆ ಮಾಡಲು ಹಣಕಾಸು ಇಲಾಖೆ ಅನುಮೋದನೆ ನೀಡಿದೆ.

**ಗಡುವು ವಿಸ್ತರಣೆ:** ರಾಜ್ಯ ಮತ್ತು ಜಿಲ್ಲಾ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ' ಪಡೆಯಲು ಸರಕಾರಿ ನೌಕರರು, ಅಧಿಕಾರಿಗಳು ಅರ್ಜಿ ಸಲ್ಲಿಸುವ ಗಡುವನ್ನು ನವೆಂಬರ್ 30ರ ವರೆಗೆ ವಿಸ್ತರಿಸಲಾಗಿದೆ.